150 ಶೀ 1 - 72 = (130)
4RK
05/06/20

# ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಬಿ.ಎಂ. ಫಾರೂಖ್ ರವರ ನಿಯಮ 72 ರ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

**ವಿಷಯ:**

1) ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ರಾಜ್ಯ ಮಟ್ಟದ ಜೇಷ್ಠತೆಯ ಕುರಿತು ಮಾನ್ಯ ಉಚ್ಚ ನ್ಯಾಯಾಲಯ ಹೊರಡಿಸಿರುವ ಆದೇಶದ ಪ್ರತಿ ಒದಗಿಸುವುದು.

2) ಮಾನ್ಯ ಉಚ್ಚ ನ್ಯಾಯಾಲಯದ ಆದೇಶದ ಪ್ರಕಾರ ಸಮಿತಿ ರಚನೆಯ ಆದೇಶದ ಪ್ರತಿ ಒದಗಿಸುವುದು.

3) ಸದರಿ ಆದೇಶವು ಮಾನ್ಯ ಉಚ್ಚ ನ್ಯಾಯಾಲಯದ ಆದೇಶದಂತೆ ಹೊರಡಿಸದೆ ವಿರುದ್ಧವಾಗಿ ಹೊರಡಿಸಲು ಕಾರಣ.

4) ಮಾನ್ಯ ಉಚ್ಚ ನ್ಯಾಯಾಲಯದ ಆದೇಶದ ಸಮಿತಿಯ ಸಂಯೋಜಕರ ಬದಲಾಗಿ ಪಂಚಾಯತ್ ರಾಜ್ ಆಯುಕ್ತಾಲಯದ ಅಧಿಕಾರಿಗಳು ಸಮಿತಿಯ ಕಾರ್ಯಗಳನ್ನು ನಿರ್ವಹಿಸುತ್ತಿರುವುದು ಮಾನ್ಯ ಉಚ್ಚ ನ್ಯಾಯಾಲಯದ ಆದೇಶ ಉಲ್ಲಂಘನೆ ಮಾಡಿದಂತಾಗುವುದಲ್ಲವೆ ಹೀಗೆ ಮಾಡಲು ಕಾರಣ

**ಉತ್ತರ:** ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ರಾಜ್ಯ ಮಟ್ಟದ ಜೇಷ್ಠತೆಯ ಬಗ್ಗೆ ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ: 33613/2019 ಹಾಗೂ ತತ್ಸಂಬಂಧಿತ ಪ್ರಕರಣಗಳಲ್ಲಿ ದಿನಾಂಕ:22.06.2023 ರಂದು ನೀಡಿರುವ ಆದೇಶದ ಪ್ರತಿಯನ್ನು ಅನುಬಂಧ-1 ರಲ್ಲಿ ನೀಡಿದೆ.

ಮಾನ್ಯ ಉಚ್ಚ ನ್ಯಾಯಾಲಯದ ಆದೇಶದನ್ವಯ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದ ಜೇಷ್ಠತಾ ಪಟ್ಟಿಯನ್ನು ಪರಿಷ್ಕರಿಸಲು ಸಮಿತಿ ರಚಿಸಿ ಸರ್ಕಾರದಿಂದ ಹೊರಡಿಸಿದ ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿಪಿ 110 ಜಿಪಿಎಸ್ 2023, ದಿನಾಂಕ:07-07-2023 ರ ಪ್ರತಿಯನ್ನು ಅನುಬಂಧ-2 ರಲ್ಲಿ ನೀಡಿದೆ.

ಮಾನ್ಯ ಉಚ್ಚ ನ್ಯಾಯಾಲಯದ ಆದೇಶಕ್ಕೆ ವಿರುದ್ಧವಾಗಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದ ಜೇಷ್ಠತಾ ಪಟ್ಟಿಯನ್ನು ಪರಿಷ್ಕರಿಸಲು ಸಮಿತಿಯನ್ನು ರಚಿಸಿ ಆದೇಶಿಸಿರುವುದಿಲ್ಲ.

ಆಯುಕ್ತರು, ಪಂಚಾಯತ್ ರಾಜ್ ರವರ ಅಧ್ಯಕ್ಷತೆಯಲ್ಲಿ ರಚಿಸಲಾದ ಸಮಿತಿಯು ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದ ಜೇಷ್ಠತಾ ಪಟ್ಟಿಗೆ ಮಾಡಿರುವ ಆಕ್ಷೇಪಣೆ / ಅಹವಾಲುಗಳನ್ನು ಪರಿಶೀಲಿಸುವ ಕಾರ್ಯಗಳಿಗೆ ಸಮಿತಿಗೆ ನೆರವಾಗಲು ಮತ್ತು ಅಗತ್ಯ ಕಡತಗಳನ್ನು ಮಂಡಿಸಲು ಬಾಹ್ಯ ಮೂಲದ ನಿವೃತ್ತ ಅಧಿಕಾರಿಗಳನ್ನು ಆದೇಶ ಸಂಖ್ಯೆ:ಕಪಂರಾಅ/ಎಂಐಎಸ್‌ಸಿ/209/2023, ದಿನಾಂಕ: 31-07-2023 ರಲ್ಲಿ ನೇಮಿಸಲಾಗಿದ್ದು, ಪ್ರತಿಯನ್ನು ಅನುಬಂಧ-3 ರಲ್ಲಿ ನೀಡಿದೆ.

ಸಂಖ್ಯೆ:RDPR 381 GPA 2023

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.